ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎ.ಸಿ.ಜೆ.ಎಂ. ನ್ಯಾಯಾಲಯ,
ಉಡುಪಿ.

ಸಿ.ಸಿ.:1188/2024
ಸಿ.ಡಬ್ಲ್ಯು 6 ಪಿ.ಡಬ್ಲೂ : 8

| | |
|---|---|
| ಸಾಕ್ಷಿದಾರರ ಹೆಸರು | ಚಂದ್ರ ಬಿಲ್ಲವ |
| ತಂದೆಯ ಹೆಸರು | ರಾಮ ಬಿಲ್ಲವ |
| ವಯಸ್ಸು | 46 ವರ್ಷ |
| ಉದ್ಯೋಗ | ಹೆಚ್ ಸಿ |
| ವಾಸಸ್ಥಳ | ಕಾರ್ಕಳ |

ದಿನಾಂಕಃ 15-11-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ದಿಃ 22-02-2017 ರಿಂದ ದಿಃ 24-07-2024 ರ ವರೆಗೆ ಪಡುಬಿದ್ರಿ ಪೊಲೀಸ್ ಠಾಣೆಯಲ್ಲಿ ಹೆಡ್ ಕಾನ್ಸ್ಟೇಬಲ್ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿಃ 01-11-2019 ರಂದು ನಾನು ಠಾಣಾ ಕರ್ತವ್ಯದ ಮೇಲೆ ಇರುವಾಗ ರಾತ್ರಿ 2.00 ವೇಳೆ ಚಾಸಾ 1 ರವರು ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 93/219 ರಂತೆ ಪ್ರಕರಣರವನ್ನು ದಾಖಲಸಿಕೊಂಡು ಪ್ರಥಮ ವರ್ತಮಾನ ವರದಿ ಯನ್ನು ತಯಾರಿಸಿ ನ್ಯಾಯಾಲಯಕ್ಕೆ ಸಲ್ಲಿಸಿದೆನು. ಸಾಕ್ಷಿಯವರು ದೂರು ಮತ್ತು ಅದರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ದೂರನ್ನು ಈಗಾಗಲೇ ನಿಪಿ. 1 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು ನಿಪಿ.1 ಎ ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಸಾಕ್ಷಿಯವರು ನೋಡಿ ಗುರುತಿಸಿದ್ದು ನಿಪಿ 3 ಎಂದು ಗುರುತಿಸಲಾಯಿತು. ನಿಪಿ 3 ರಲ್ಲಿರುವ ಸಹಿಯು ಡಿಜಿಟಲ್ ಸಹಿ ಆಗಿರುವುದರಿಂದ ಸಹಿಯನ್ನು ಗುರುತಿಸಿರುವುದಿಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎಸ್ ಹೆಚ್ ಕೆ. ವಕೀಲರಿಂದಃ**

ಚಾಸಾ 1 ರವರು ನಿಮ್ಮ ಸಹೋದ್ಯೋಗಿಯಾಗಿದ್ದರಿಂದ ಅವರು ನೀಡಿದ ದೂರಿನ ಸತ್ಯಾಸತ್ಯೆಯನ್ನು ಪರಿಶೀಲಿಸದೆ ಆರೋಪಿತರ ವಿರುದ್ದ ಪ್ರಥಮ ವರ್ತಮಾನ ವರದಿಯನ್ನು ದಾಖಲು ಮಾಡಿರುತ್ತೀರಿ ಎಂದರೆ ಸರಿಯಲ್ಲ. ಆರೋಪಿತರಿಗೂ ಈ ಪ್ರಕರಣ ಕ್ಕೂ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಎಂದು ಒಪ್ಪಿದ್ದೇನೆ.

ಹೆ.ಹಿ.ಸಿ.ನ್ಯಾ ಮತ್ತು ಎಸಿಜೆಎಂ ಉಡುಪಿ.